ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.*

(6) ೧೯೮೭ನೇ ಇಸವಿಯ ಕರ್ನಾಟಕ ಯೋಜನೆಯಿಂದಾಗಿ ಸ್ಥಳಾಂತರಿತ ವ್ಯಕ್ತಿಗಳ ಪುನರ್ ವ್ಯವಸ್ಥೆಯ ವಿಧೇಯಕ.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಸಚಿವರು) ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ಕರ್ನಾಟಕ ಯೋಜನೆಯಿಂದಾಗಿ ಸ್ಥಳಾಂತರಿತ ವ್ಯಕ್ತಿಗಳ ಪುನರ್ ವ್ಯವಸ್ಥೆಯ ವಿಧೇಯಕವನ್ನ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ವೇನೆಂದರೆ ೧೯೮೭ನೇ ಇಸವಿಯ ಕರ್ನಾಟಕ ಯೋಜನೆಯಿಂದಾಗಿ ಸ್ಥಳಾಂತರಿತ ವ್ಯಕ್ತಿಗಳ ಪುನರ್ ವ್ಯವಸ್ಥೆಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲ್ಪಟ್ಟಿತು

ಶ್ರೀ ಎಸ್. ಆರ್. ಬೊಮ್ಮಾಯಿ.—ಮಾನ್ಯ ಅಧ್ಯಕ್ಷರೇ ೧೯೮೭ನೇ ಇಸವಿಯ ಕರ್ನಾಟಕ ಯೋಜನೆಯಿಂದಾಗಿ ಸ್ಥಳಾಂತರಿತ ವ್ಯಕ್ತಿಗಳ ಪುನರ್ ವ್ಯವಸ್ಥೆಯ ವಿಧೇಯಕವನ್ನ ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.*

೧೯೮೭ನೇ ಇಸವಿಯ ಕರ್ನಾಟಕ ಅರಣ್ಯ ಉತ್ಪನ್ನವನ್ನು ಸರ್ಕಾರದಿಂದ ಸರಬರಾಜು ಮಾಡುವ (ಒಪ್ಪಂದಗಳ ಪರಿಷ್ಕರಣೆ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ. ಎಸ್. ಬಾಗಲಕೋಟೆ (ಅರಣ್ಯ ರಾಜ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ; ೧೯೮೭ನೇ ಇಸವಿಯ ಕರ್ನಾಟಕ ಅರಣ್ಯ ಉತ್ಪನ್ನವನ್ನು ಸರ್ಕಾರದಿಂದ ಸರಬರಾಜು ಮಾಡುವ (ಒಪ್ಪಂದಗಳ ಪರಿಷ್ಕರಣೆ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು. - ಪ್ರಸ್ತಾಪ ಏನೆಂದರೆ : "೧೯೮೭ರ ಕರ್ನಾಟಕ ಅರಣ್ಯ ಉತ್ಪನ್ನವನ್ನು ಸರ್ಕಾರದಿಂದ ಸರಬರಾಜು ಮಾಡುವ (ಒಪ್ಪಂದಗಳ ಪರಿಷ್ಕರಣೆ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡಂವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಜಿ. ಎಸ್. ಬಾಗಲಕೋಟ್.—ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ಕರ್ನಾಟಕ ಅರಣ್ಯ ಉತ್ಪನ್ನವನ್ನು ಸರ್ಕಾರದಿಂದ ಸರಬರಾಜು ಮಾಡುವ (ಒಪ್ಪಂದಗಳ ಪರಿಷ್ಕರಣೆ) ವಿಧೇಯಕವನ್ನ ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

ಸದಸ್ಯರ ಗೈರು ಹಾಜರಿಗೆ ಅನುಮತಿ

ಅಧ್ಯಕ್ಷರು.—ವಿಧಾನಭಾ ಸದಸ್ಯರಾದ ಶ್ರೀ ಆರ್. ಟಿ. ದೇಸಾಯಿಯವರು, ಅನಾರೋಗ್ಯದ ಕಾರಣವಾಗಿ ದಿನಾಂಕ ೩೧-೮-೧೯೮೭ ರಿಂದ ೧೦-೯-೮೭ರವರೆಗೆ ವಿಧಾನ ಸಭಾ ಉಪವೇಶನಗಳಿಗೆ ಗೈರು ಹಾಜರಾಗಲು ಅನುಮತಿಯನ್ನು ಕೋರಿ ಪತ್ರ ಬರೆದಿರುತ್ತಾರೆ.

"ಶ್ರೀ ಆರ್. ಟಿ. ದೇಸಾಯಿಯವರಿಗೆ, ವಿಧಾನ ಸಭೆಯ ಉಪವೇಶನಗಳಿಗೆ ಮೇಲೆ ಸೂಚಿಸಿದ ಅವಧಿಯಲ್ಲಿ ಗೈರು ಹಾಜರಾಗಲು ಸದನವು ಅನುಮತಿಯನ್ನು ನೀಡಬೇಕೆಂದು ಅಪೇಕ್ಷಿಸುತ್ತದೆಯೇ ?"